

ಅರುಣ ಪಿ. ಭಟ್ಟ

# ವಾರಭವಿಷ್ಯ 9.1.2020ರಿಂದ 15.1.2020



**ಮೇಷ**

ಮನೆಗೆ ನೆಂಟರಿಷ್ಟರ ಆಗಮನದಿಂದ ಸಂತಸದ ವಾತಾವರಣ ಕಂಡುಬರುತ್ತದೆ. ಆರ್ಥಿಕವಾಗಿ ಆದಾಯ ಹೆಚ್ಚುವ ಸಾಧ್ಯತೆ ಇದೆ. ನಿರೀಕ್ಷಿತ ಕಾರ್ಯಗಳು ಸರಾಗವಾಗಿ ನಡೆಯಲಿವೆ. ಬರಬೇಕಾದ ಬಾಕಿ ಬರುವ ಸಾಧ್ಯತೆಗಳಿವೆ. ಉತ್ತಮ ಆದಾಯ.

ಶುಭದಿನ: 12. ಲಕ್ಷ್ಮೀ ನರಸಿಂಹ ಸ್ತೋತ್ರ ಜಪಿಸಿ.



**ವೃಷಭ**

ನಿಮ್ಮ ಕೆಲಸ ಕಾರ್ಯಗಳು ದೈವ ಪ್ರೇರಣೆಯಿಂದ ಸುಲಭವಾಗಿ ನಡೆಯುತ್ತವೆ. ವೈಯಕ್ತಿಕ ಸಮಸ್ಯೆಗಳನ್ನು ಕುಟುಂಬದೊಡನೆ ಚರ್ಚಿಸಿ ಪರಿಹಾರ ಹುಡುಕುವುದು ಒಳಿತು. ಸಹವರ್ತಿಗಳಿಂದ ಉದ್ಯೋಗದಲ್ಲಿ ಅಪವಾದಗಳಿಗೆ ಗುರಿಯಾಗುವ ಸಾಧ್ಯತೆ ಇದೆ.

ಶುಭದಿನ 14. ಹನುಮಾನ್ ಚಾಲೀಸ್ ಓದಿರಿ.



**ಮಿಥುನ**

ಯಶಸ್ವಿಯಾಗಿ ಕಾರ್ಯ ಸಿದ್ಧಿ. ಮನಸ್ಸಿನಲ್ಲಿ ಉದ್ಭವವಾಗುವ ಆಮಿಷಗಳನ್ನು ನಿಯಂತ್ರಿಸುವುದು ಸೂಕ್ತ. ಆರ್ಥಿಕ ಸ್ಥಿತಿ ಉತ್ತಮವಾಗಿದೆ. ಸಂಗಾತಿ ನಿಮ್ಮ ಯೋಜನೆಗೆ ಉತ್ತಮ ರೀತಿಯ ವಿಷಯಗಳನ್ನು ತಿಳಿಸುವ ಸಾಧ್ಯತೆಯಿದೆ.

ಶುಭದಿನ 11. ವಿಷ್ಣು ಸಹಸ್ರನಾಮ ಪಠಿಸಿರಿ.



**ಕಟಕ**

ಕೆಲಸದಲ್ಲಿ ಪ್ರಬುದ್ಧತೆ. ಶಿಸ್ತು ಮತ್ತು ಸಂಯಮದಿಂದ ಜೀವನ ಕಟ್ಟಿಕೊಳ್ಳುವ ಪ್ರಯತ್ನ ಸಾಗಲಿ. ನಿಮ್ಮಲ್ಲಿನ ವಿಶೇಷ ಪ್ರತಿಭೆಗೆ ಸೂಕ್ತ ವೇದಿಕೆ ದೊರೆಯುವುದು. ಪ್ರಮುಖ ಕಾರ್ಯಗಳನ್ನು ಮಾಡಿ ಮುಗಿಸುವಿರಿ. ವಾಹನ ಕ್ರಯ ವಿಕ್ರಯ ಯೋಗವಿದೆ.

ಶುಭದಿನ 14. ಶ್ರೀ ದಕ್ಷಿಣಾಮೂರ್ತಿ ಸ್ತೋತ್ರ ಪಠಿಸಿರಿ.



**ಸಿಂಹ**

ಕಾಲ ಬರಲಿ ಎಂದು ಸುಮ್ಮನಿರಬೇಡಿ. ನಿರೀಕ್ಷಿತ ಆದಾಯ ನಿಮ್ಮ ಕೈ ಸೇರುವ ಸಾಧ್ಯತೆ. ಕುಟುಂಬದ ಕೆಲವು ವಿಚಾರಗಳಿಂದ ಮಾನಸಿಕ ತೊಂದರೆ ಅನುಭವಿಸುವಿರಿ. ಯೋಜನೆಗಳಲ್ಲಿ ಇತರರ ಹಸ್ತಕ್ಷೇಪದಿಂದ ಹಿನ್ನಡೆಯಾಗಬಹುದು.

ಶುಭದಿನ 12. ಸೌಂದರ್ಯ ಲಹರಿ ಪಠಿಸಿರಿ.



**ಕನ್ಯಾ**

ಕೆಲಸದಲ್ಲಿ ಟೀಕೆಗಳು ಬರಬಹುದು. ಸಹೋದರರೊಡನೆ ವೈಚಾರಿಕ ಭಿನ್ನಮತ ಉಂಟಾಗಬಹುದು. ಅಂದುಕೊಂಡ ಕೆಲಸಗಳು ಮಂದಗತಿಯಲ್ಲಿ ನಡೆಯಬಹುದು. ಸೇವಾ ವಲಯದಲ್ಲಿ ಕಾರ್ಯ ನಿರ್ವಹಿಸುವವರಿಗೆ ಬಡ್ತಿ.

ಶುಭದಿನ: 15. ಲಿಂಗಾಷ್ಟಕ ಪಠಿಸಿರಿ.



**ತುಲಾ**

ಸಂತೋಷದಿಂದ ಕಾರ್ಯಗಳನ್ನು ಮಾಡಲು ಮುಂದಾಗಿ. ಆರೋಗ್ಯದ ವಿಷಯವಾಗಿ ಜಾಗ್ರತೆ ವಹಿಸಿ. ಸುಖಾಸುಮ್ಮನೆ ಕೋಪ ವ್ಯಕ್ತಪಡಿಸುವುದು ಒಳಿತಲ್ಲ.ಉದ್ಯೋಗ ಸ್ಥಳದಲ್ಲಿ ಸ್ವಲ್ಪ ಮಟ್ಟಿಗೆ ಒತ್ತಡ ಕಾಣಿಸಿಕೊಳ್ಳಬಹುದು.

ಶುಭದಿನ 11. ಗಣಪತಿಗೆ ದೂರ್ವಾರ್ಚನೆ ಮಾಡಿರಿ.



**ವೃಶ್ಚಿಕ**

ಅಪರೂಪದ ವ್ಯಕ್ತಿಗಳನ್ನು ಭೇಟಿಯಾಗುತ್ತೀರಿ. ಮಕ್ಕಳ ಉದ್ಯೋಗದ ಬಗ್ಗೆ ಚಿಂತೆ ಆವರಿಸಬಹುದು. ಮಿತ್ರರಿಂದ ಔತಣಕೂಟ. ಹಳೆಯ ನೆನಪುಗಳು ಬಹುಕಾಡಲಿವೆ. ಅಧ್ಯಾತ್ಮದ ವಿಚಾರದ ಬಗ್ಗೆ ಗಮನ ಹರಿಸುವಿರಿ.

ಶುಭದಿನ: 11. ಶಿವಕವಚ ಪಠಣ ಮಾಡಿರಿ.



**ಧನಸ್ಸು**

ವಿದೇಶದ ಪ್ರವಾಸದ ಯೋಜನೆ ಸಕಾರಾತ್ಮಕವಾಗಿ ನಡೆಯಬಹುದು. ಆಸ್ತಿ ಮಾರಾಟದ ವಿಷಯದಲ್ಲಿ ಶುಭ ಫಲಿತಾಂಶ. ಮಕ್ಕಳ ಪ್ರಗತಿಗಾಗಿ ಹೆಚ್ಚಿನ ಹಣ ಖರ್ಚಾಗುವ ಸಾಧ್ಯತೆ. ಸಾಮಾಜಿಕ ಕ್ಷೇತ್ರದಲ್ಲಿ ಹಿನ್ನಡೆ ಕಂಡುಬರುತ್ತದೆ.

ಶುಭದಿನ 9. ಗಣಪತಿ ಸುಬ್ರಹ್ಮಣ್ಯ ಜಪ ಮಾಡಿರಿ.



**ಮಕರ**

ಓದಿನ ಕಡೆಗೆ ಉತ್ಸಾಹ ಹೆಚ್ಚಾಗುತ್ತದೆ. ಕೆಲವರ ಬಗ್ಗೆ ಈ ವಾರ ನಿಮಗೆ ಅನುಮಾನ ಮೂಡುವ ಸಾಧ್ಯತೆ. ಕೆಲಸದ ವಿಷಯದಲ್ಲಿ ಹೆಚ್ಚುವರಿ ಜವಾಬ್ದಾರಿ ನಿಮಗೆ ಸಿಗುವುದು. ಕನಸುಗಳನ್ನು ನನಸು ಮಾಡಿಕೊಳ್ಳುವ ಪ್ರಯತ್ನ ನಿಮ್ಮಿಂದ ಬೇಕಾಗಿದೆ.

ಶುಭದಿನ 10. ನವದುರ್ಗಾ ಆರಾಧನೆ ಮಾಡಿರಿ.



**ಕುಂಭ**

ನಿಮ್ಮ ಆರೋಗ್ಯ ಉತ್ತಮವಾಗಿರುತ್ತದೆ. ಆ ಕಾರಣಕ್ಕೆ ನೀವೂ ಸಂತೋಷವಾಗಿರುತ್ತೀರಿ. ಸದ್ಯಕ್ಕೆ ನೀವು ಎದುರಿಸುತ್ತಿರುವ ಬಿಕ್ಕಟ್ಟುಗಳು ನಿವಾರಣೆ ಆಗುತ್ತವೆ. ನಿಮ್ಮ ಸಾಮರ್ಥ್ಯ ಹಾಗೂ ಒಟ್ಟಾರೆ ಆಲೋಚನೆಯಲ್ಲಿ ಪ್ರಗತಿ.

ಶುಭದಿನ 9. ಶನಿಸ್ತೋತ್ರ ಪಠಿಸಿರಿ.



**ಮೀನ**

ಈವರೆಗಿನ ಬಿಕ್ಕಟ್ಟು ಸಮಸ್ಯೆ ಶಮನವಾಗುತ್ತವೆ. ಕನಿಷ್ಠ ಪಕ್ಷ ಪರಿಸ್ಥಿತಿಯಲ್ಲಿ ಸುಧಾರಣೆ ಕಾಣಿಸುತ್ತದೆ. ನಿಮ್ಮ ಸಾಮರ್ಥ್ಯ, ಚೈತನ್ಯ ವೃದ್ಧಿಯಾಗುತ್ತದೆ. ಇದರ ಜತೆಗೆ ಧೈರ್ಯ, ಮಾನಸಿಕ ದೃಢತೆ ಹೆಚ್ಚಲಿದೆ. ನಿಮ್ಮ ವಿರೋಧಿಗಳನ್ನು ಮಣಿಸುತ್ತೀರಿ.

ಶುಭದಿನ 10. ವೆಂಕಟೇಶ್ವರ ಸ್ತೋತ್ರ ಪಠಿಸಿರಿ.


